# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆಯ ಯೋಜನೆಗಳಿಗೆ 2020-21ನೇ ಸಾಲಿನಲ್ಲಿ ಒದಗಿಸಿರುವ ಆಯವ್ಯಯದಲ್ಲಿ ಎರಡನೇ ತ್ರೈಮಾಸಿಕ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 164 ಎಂಡಿಎಸ್ 2020, ದಿನಾಂಕ:19.05.2020
2. ಆರ್ಥಿಕ ಇಲಾಖೆಯ ಅನಧಿಕೃತ್ತ ಟಿಪ್ಪಣಿ ಅಇ 94 ವೆಚ್ಚ-3/2020, ದಿನಾಂಕ:30.05.2020
3. ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 164 ಎಂಡಿಎಸ್ 2020, ದಿನಾಂಕ:11.06.2020 ಹಾಗೂ ದಿನಾಂಕ:24.06.2020
4. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರ ಪತ್ರ ಸಂಖ್ಯೆ:ಅಸಂನಿ/ಆ.ವ್ಯ/ಬಿಡುಗಡೆ/ಸಿಆರ್/03/2020-21, ದಿನಾಂಕ:21.08.2020
5. ಮುಖ್ಯಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಇವರ ಪತ್ರ ಸಂಖ್ಯೆ: ಕರಾವಮಂ/ ಬಿಲ್ಸ್/01 /2020-21, ದಿನಾಂಕ:31.08.2020
6. ವ್ಯವಸ್ಥಾಪಕ ನಿರ್ದೇಶಕರು, ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಇವರ ಪತ್ರ ಸಂಖ್ಯೆ: ಕಅಅನಿ/ ಲೆಕ್ಕಪತ್ರ/920/ 2020-21, ದಿನಾಂಕ:04.09.2020
7. ನಿಬಂಧಕರು, ಕರ್ನಾಟಕ ಉರ್ದು ಅಕಾಡೆಮಿ ಇವರ ಪತ್ರ ಸಂಖ್ಯೆ: ಕಉಅ/ಅಕಾಡೆಮಿ/ಅನುದಾನ/02/2020-21/252/, ದಿನಾಂಕ:04.09.2020
8. ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ಹಜ್ ಸಮಿತಿ ಇವರ ಪತ್ರ ಸಂಖ್ಯೆ:ಕೆ.ಹೆಚ್.ಸಿ/ ಎ.ಸಿ.ಟಿ/12/2020-21, ದಿನಾಂಕ:04.09.2020
9. ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ ಇವರ ಪತ್ರ ದಿನಾಂಕ:18.09.2020.

## ಪ್ರಸ್ತಾವನೆ:

ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆಯಲ್ಲಿ 2020-21ನೇ ಸಾಲಿನಲ್ಲಿ ಚಾಲ್ತಿಯಲ್ಲಿದ್ದ ಯೋಜನಾ ಕಾರ್ಯಕ್ರಮಗಳನ್ನು 2020-21ನೇ ಸಾಲಿನವರೆಗೆ ಮುಂದುವರೆಸಿ ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಲ್ಲಿ ಸರ್ಕಾರದ ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ಆರ್ಥಿಕ ಇಲಾಖೆಯು 2020-21ನೇ ಸಾಲಿನ ಆಯವ್ಯದಲ್ಲಿ ನಿಗಧಿಪಡಿಸಲಾದ ಅನುದಾನದಲ್ಲಿ ಶೇ.25.%ರಷ್ಟು ಅನುದಾನವನ್ನು ನಿಗಧಿತ ಕಾಲದಲ್ಲಿ ಸಂಬಂಧಪಟ್ಟ ಇಲಾಖೆಯವರು ವೆಚ್ಚ ಮಾಡಲು ಅನುಮತಿ ನೀಡಿ ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರಲ್ಲಿ ಆರ್ಥಿಕ ಇಲಾಖೆಯು ಅನುಮತಿ ನೀಡಿರುವಂತೆ 2020-21ನೇ ಸಾಲಿನ ಆಯವ್ಯಯದಲ್ಲಿ ನಿಗಧಿಪಡಿಸಲಾದ ಅನುದಾನದಲ್ಲಿ ಶೇ:25 ರಷ್ಟು ಮೊದಲನೇ ತ್ರೈಮಾಸಿಕ ಕಂತಿನ ಅನುದಾನವಾಗಿ ಅಧೀನ ಇಲಾಖೆಗಳಿಗೆ ಬಿಡುಗಡೆ ಮಾಡಿ ಆದೇಶ ಹೊರಡಿಸಲಾಗಿದೆ.